ಶ್ರೀ ವಾಟಾಳ್ ನಾಗರಾಜ್:- ಇದ್ದಕ್ಕಿದ್ದಹಾಗೆ ಕೂಡಲಸಂಗಮ ವಿಧೇಯಕ ತಂದಿದ್ದೀರಿ ನೀವು. ಯಾರಿಗಾದರೂ ಹೇಳಿದ್ದೀರಾ ತರುವುದಕ್ಕಿಂತ ಮುಂಚೆ?

ಅಧ್ಯಕ್ಷರು: ಪ್ರಸ್ತಾವ ಏನೆಂದರೆ:

''1994ನೇ ಸಾಲಿನ ಕೂಡಲಸಂಗಮ ಅಭಿವೃದ್ಧಿ ಮಂಡಳಿ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು. ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ.ವೀರಪ್ಪ ಮೊಯಿಲಿ (ಮುಖ್ಯಮಂತ್ರಿಯವರು):- ಸನ್ಮಾನ್ಯ ಅಧ್ಯಕ್ಷರೆ, 1994ನೇ ಸಾಲಿನ ಕೂಡಲಸಂಗಮ ಅಭಿವೃದ್ಧಿ ಮಂಡಳಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:- ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ V

1994 ರ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎಂ.ಯಾಹ್ಯಾ:- (ಉನ್ನತ ಶಿಕ್ಷಣ ಸಚಿವರು) :- ಮಾನ್ಯ ಅಧ್ಯಕ್ಷರೇ, '' 1994ರ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.''

ಅಧ್ಯಕ್ಷರು:-ಪ್ರಸ್ತಾಪ ಏನೆಂದರೆ '' 1994ನೇ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್. ಎಂ. ಯಾಹ್ಯಾ:- ಮಾನ್ಯ ಅಧ್ಯಕ್ಷರೇ,'' 1994ರ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.''

ಅಧ್ಯಕ್ಷರು:- ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ VI

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಧನ ವಿನಿಯೋಗ (ನಂ.4) ವಿಧೇಯಕ, 1994.

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಎಂ.ವೀರಪ್ಪ ಮೊಯಿಲಿ (ಮುಖ್ಯಮಂತ್ರಿ):- ಮಾನ್ಯ ಅಧ್ಯಕ್ಷರೆ, ಕರ್ನಾಟಕ ಧನ ವಿನಿಯೋಗ (ನಂ.4) ವಿಧೇಯಕ, 1994ನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾಪವನ್ನು ಮಂಡಿಸಲಾಯಿತು

ಶ್ರೀ ಆರ್ ವಿ ದೇಶಪಾಂಡೆ:- ನಮ್ಮ ನಿಮ್ಮ ಅಂಡರ್‌ಸ್ಟ್ಯಾಂಡಿಂಗ್ ಏನಾಗಿತ್ತು ಎಂಬುದನ್ನು ಗಮನಿಸಬೇಕು; ರೂಲ್ 68 ಆಯಿತು. ಸಂಪ್ಲಿಮೆಂಟರಿ ಎಸ್ಟಿಮೇಟ್ ಆಗಲಿಲ್ಲ. We are not against. We will definitely do it.

ಶ್ರೀ ಎಂ.ವೀರಪ್ಪ ಮೊಯಿಲಿ:- ಎರಡು ನಾನ್ ಕಾನ್‌ಟ್ರೊವರ್ಷಿಯಲ್ ಬಿಲ್‌ಗಳಿವೆ, ಅವುಗಳನ್ನು ಕೂಡಲೇ ಪಾಸ್ ಮಾಡೋಣ.

ಅಧ್ಯಕ್ಷರು:- ಪ್ರಸ್ತಾಪ ಏನೆಂದರೆ, '' ಕರ್ನಾಟಕ ಧನ ವಿನಿಯೋಗ (ನಂ.4) ವಿಧೇಯಕ 1994ನ್ನು ಪರ್ಯಾಲೋಚಿಸುವುದು''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು

ಖಂಡಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3:-

ಅಧ್ಯಕ್ಷರು:- ''ಖಂಡ 2 ಮತ್ತು 3, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3 ಎರಡೂ ಸೇರಿದಂತೆ, ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ:-

ಅಧ್ಯಕ್ಷರು :- ಪ್ರಸ್ತಾಪ ಏನೆಂದರೆ,''ಮೊದಲ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ''

ಪ್ರಸ್ತಾಪ ಅಂಗೀಕರಿಸಲಾಯಿತು

(ಮೊದಲ ಖಂಡ, ಧೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾಪದ ಅಂಗೀಕಾರ

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿ) :- ಮಾನ್ಯ ಅಧ್ಯಕ್ಷರೇ, ''ಜೈ ಕರ್ನಾಟಕ ಧನವಿನಿಯೋಗ (ನಂ.4) ವಿಧೇಯಕ 1994ನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾಪ ಏನೆಂದರೆ ''ಕರ್ನಾಟಕ ಧನವಿನಿಯೋಗ (ನಂ.4) ವಿಧೇಯಕ 1994ನ್ನು ಅಂಗೀಕರಿಸುವುದು.''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು